ಬಾಲಕರ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯ

249 - ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1995-96ನೇ ಸಾಲಿನಲ್ಲಿ ಎಷ್ಟು ಪದವಿ : ಪದವಿಪೂರ್ವ ಕಾಲೇಜು ಬಾಲಕರ ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗಿದೆ ಹಾಗೂ ಯಾವುವು?*

ಆ) *ಪರಿಶಿಷ್ಟ ಜಾತಿಯ ಮತ್ತು ಮೆಟ್ರಿಕ್ ಪೂರ್ವ ಬಾಲಕರ : ಬಾಲಕಿಯರ ವಿದ್ಯಾರ್ಥಿಗಳನ್ನು 95-96ನೇ ಸಾಲಿನಲ್ಲಿ ತೆರೆಯಲಾಗಿದೆ ಹಾಗೂ ಅವು ಯಾವುವು?*

ಶ್ರೀ ರಮೇಶ್ ಸಿ. ಜಿಗಜಿಣಗಿ (ಸಮಾಜ ಕಲ್ಯಾಣ ಸಚಿವರು) :

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಸಂಬಂಧಿಸಿದಂತೆ 1995-96ನೇ ಸಾಲಿನಲ್ಲಿ 40 ಪದವಿ : ಪದವಿಪೂರ್ವ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಸರ್ಕಾರ ಮಂಜೂರಾತಿ ನೀಡಿದವು. ಈ ಪೈಕಿ 13ವಿದ್ಯಾರ್ಥಿನಿಲಯಗಳನ್ನು ಈಗಾಗಲೇ ಪ್ರಾರಂಭಿಸಲಾಗಿದೆ.

ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರರಿಗೆ ಸಂಬಂಧಿಸಿದಂತೆ 25 ಮೆಟ್ರಿಕ ನಂತರ ವಿದ್ಯಾರ್ಥಿ ನಿಲಯಗಳನ್ನು 95-96ನೇ ಸಾಲಿನಲ್ಲಿ ಮಂಜೂರು ಮಾಡಲಾಗಿದ್ದು, ಈ ಪೈಕಿ 3 ವಿದ್ಯಾರ್ಥಿನಿಲಯಗಳನ್ನು ಈಗಾಗಲೇ ಪ್ರಾರಂಭಿಸಲಾಗಿದೆ (ವಿವರಗಳನ್ನು ಲಗತ್ತಿಸಿರುವ ಅನುಬಂಧ-1 ರಲ್ಲಿ ನೀಡಲಾಗಿದೆ)

ಆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗಾಗಿ 95-96ನೇ ಸಾಲಿನಲ್ಲಿ ಒಟ್ಟು 119 ವಿದ್ಯಾರ್ಥಿ ನಿಲಯಗಳನ್ನು ಸರ್ಕಾರಿ ಆದೇಶ ಸಂ. ಸಕಇ 27 ಪಕವಿ 94 ದಿನಾಂಕ 13-11-95ರಲ್ಲಿ ಮಂಜೂರಾತಿಯನ್ನು ನೀಡಲಾಗಿದ್ದು, ಈ ಪೈಕಿ 56 ವಿದ್ಯಾರ್ಥಿನಿಲಯಗಳನ್ನು ಈಗಾಗಲೇ ಪ್ರಾರಂಭಿಸಲಾಗಿದೆ (ವಿವರಗಳನ್ನು ಲಗತ್ತಿಸಿರುವ ಅನುಬಂಧ-2ರಲ್ಲಿ ನೀಡಲಾಗಿದೆ)

ಅನುಬಂಧ -1

1995-96ನೇ ಸಾಲಿನಲ್ಲಿ ಪ್ರಾರಂಭಿಸಲಾದ ಪದವಿ ಮತ್ತು ಪದವಿಪೂರ್ವ ವಿದ್ಯಾರ್ಥಿ ನಿಯಮಗಳ ವಿವರ :

ಪರಿಶಿಷ್ಟ ಜ ತ ಮತ್ತು ಪರಿಶಿಷ್ಟ ವರ್ಗದವರಿಗಾಗಿ :

1) ಕಾಲೇಜು ವಿದ್ಯಾರ್ಥಿ ನಿಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ
2) ಪದವಿ ಕಾಲೇಜು ವಿದ್ಯಾರ್ಥಿ ನಿಲಯ, ಚಾಮರಾಜ ನಗರ.
3) ಪದವಿ ಪೂರ್ವ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ, ಶ್ರೀನಿವಾಸಪುರ.
4) ಪದವಿಪೂರ್ವ ಕಾಲೇಜು ವಿದ್ಯಾರ್ಥಿ ನಿಲಯ, ಗುಳೇದಗುಡ್ಡ, ಬಾದಾಮಿ ತಾಲೂಕು
5) ಕಾಲೇಜು ವಿದ್ಯಾರ್ಥಿ ನಿಲಯ, ಸಿರಗುಪ್ಪ
6) ಪದವಿ ಪೂರ್ವ ಕಾಲೇಜು ವಿದ್ಯಾರ್ಥಿ ನಿಲಯ, ಅರಸೀಕೆರೆ, ಹರಪ್ಪನಹಳ್ಳಿ.
7) ಪದವಿ ಪೂರ್ವ ಕಾಲೇಜು ವಿದ್ಯಾರ್ಥಿ ನಿಲಯ, ನವಬಾದ್, ಬೀದರ್ ನಗರ.
8) ಕಾಲೇಜು ವಿದ್ಯಾರ್ಥಿ ನಿಲಯ, ಮೈಲೂರು-1,ಬೀದರ್ ನಗರ